# <u>ದಿವಾಣಿ ನ್ಯಾಯಾಲಯ ಮತ್ತು ಜೆ. ಎಮ್. ಎಫ್. ಸಿ. ನ್ಯಾಯಾಲಯ, ಜೇವರ್ಗಿ</u>

## <u>ಸಿಸಿ ನಂ.1749/2021</u>

**<u>ಚಾಸಾ-2/ಪಿಡಬ್ಲ್ಯೂ-1</u>**

| | |
|---|---|
| **ಹೆಸರು** | ರಾಜಕುಮಾರ |
| **ತಂದೆ ಹೆಸರು** | ದ್ಯಾವಪ್ಪ |
| **ವಯಸ್ಸು** | 30 ವರ್ಷಗಳು |
| **ಉದ್ಯೋಗ** | ಒಕ್ಕಲುತನ |
| **ವಾಸ ಸ್ಥಳ** | ನೆಲೋಗಿ ಗ್ರಾಮ |

**<u>ದಿನಾಂಕ 25-07-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>**

ಚಾಸಾ-3 ನನಗೆ ಗೊತ್ತು. ಈಗ ನಾನು ಒಂದು ದಾಖಲೆ ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಸಾಕ್ಷಿ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಪಂಚನಾಮೆಯನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ)ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಒಂದು ವರ್ಷದ ಹಿಂದೆ ನೆಲೋಗಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರಕ್ಕೆ ಪೊಲೀಸರು ಪಡೆದುಕೊಂಡರು ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಏನನ್ನು ವಶ ಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಸ.ಸ.ಅರವರು ಅನುಮತಿಯುನ್ನ ಕೋರಿರುತ್ತಾರೆ. ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>**

ದಿನಾಂಕ 14-03-2021 ರಂದು ಬೆಳಿಗ್ಗೆ 06ಃ15 ರಿಂದ 07ಃ15 ರ ಸಮಯದಲ್ಲಿ ನೆಲೋಗಿ ಗ್ರಾಮದ ಕಮಾನ್ ಹತ್ತಿರ ಆರೋಪಿ ಅಕ್ರಮವಾಗಿ ಮರಳು ಸಾಗಾಣಿಕೆ ಮಾಡುತ್ತಿದ್ದಾಗ ಮಾಡಲು ಪ್ರಯತ್ನಿಸುತ್ತಿದ್ದಾಗ ಪೊಲೀಸರು ನನ್ನ ಹಾಗೂ ಚಾಸಾ-3 ರವರ ಸಮಕ್ಷಮ ದಾಳಿ ಮಾಡಿ ಟ್ರ್ಯಾಕ್ಟರನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಾನು ಹಾಜರಿದ್ದು ನಿಪಿ-1 ಕ್ಕೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಎಲ್ಲಾ ವಿಷಯ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕ.ಸರಿ.ಇದೆ.

ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳು
ಜೇವರ್ಗಿ

**<u>ದಿವಾಣಿ ನ್ಯಾಯಾಲಯ ಮತ್ತು ಜೆ. ಎಮ್. ಎಫ್. ಸಿ. ನ್ಯಾಯಾಲಯ, ಜೇವರ್ಗಿ</u>**

**<u>ಸಿಸಿ ನಂ.1749/2021</u>**

**<u>ಚಾಸಾ-3/ಪಿಡಬ್ಲೂ-2</u>**

| | |
|---|---|
| **ಹೆಸರು** | ಯಲ್ಲಪ್ಪ |
| **ತಂದೆ ಹೆಸರು** | ಬೀರಪ್ಪ |
| **ವಯಸ್ಸು** | 41 ವರ್ಷಗಳು |
| **ಉದ್ಯೋಗ** | ಒಕ್ಕಲುತನ |
| **ವಾಸ ಸ್ಥಳ** | ನೆಲೋಗಿ ಗ್ರಾಮ |

<u>ದಿನಾಂಕ **25-07-2022** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.</u>

<u>ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>

ಚಾಸಾ-2 ನನಗೆ ಗೊತ್ತು. ಈಗ ನಾನು ಒಂದು ದಾಖಲೆ ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಸಾಕ್ಷಿ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಪಂಚನಾಮೆಯನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿಯ ಸಹಿಯನ್ನು ನಿಪಿ-1(ಬಿ)ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 6-7 ತಿಂಗಳ ಹಿಂದೆ ನೆಲೋಗಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರಕ್ಕೆ ಪೊಲೀಸರು ಪಡೆದುಕೊಂಡರು ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಏನನ್ನು ವಶ ಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಸ.ಸ.ಅರವರು ಅನುಮತಿಯುನ್ನ ಕೋರಿರುತ್ತಾರೆ. ಅನುಮತಿ ನೀಡಲಾಯಿತು.)**

<u>ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>

ದಿನಾಂಕ 14-03-2021 ರಂದು ಬೆಳಿಗ್ಗೆ 06ಃ15 ರಿಂದ 07ಃ15 ರ ಸಮಯದಲ್ಲಿ ನೆಲೋಗಿ ಗ್ರಾಮದ ಕಮಾನ್ ಹತ್ತಿರ ಆರೋಪಿ ಅಕ್ರಮವಾಗಿ ಮರಳು ಸಾಗಾಣಿಕೆ ಮಾಡುತ್ತಿದ್ದಾಗ ಮಾಡಲು ಪ್ರಯತ್ನಿಸುತ್ತಿದ್ದಾಗ ಪೊಲೀಸರು ನನ್ನ ಹಾಗೂ ಚಾಸಾ-2 ರವರ ಸಮಕ್ಷಮ ದಾಳಿ ಮಾಡಿ ಟ್ರ್ಯಾಕ್ಟರನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಾನು ಹಾಜರಿದ್ದು ನಿಪಿ-1 ಕ್ಕೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಎಲ್ಲಾ ವಿಷಯ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ.ಇದೆ.

ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳು
ಜೇವರ್ಗಿ